# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 23 (132) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಡಾ\|\| ಚಂದ್ರಶೇಖರ ಬಸವರಾಜ ಪಾಟೀಲ (ಪದವೀಧರರ ಕ್ಷೇತ್ರ ) |
| ಉತ್ತರಿಸಬೇಕಾದ ದಿನಾಂಕ | : | 11.08.2025 |
| ಉತ್ತರಿಸುವ ಸಚಿವರು | : | ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಸಚಿವರು. |

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| (ಅ) | ಸರ್ಕಾರಿ ಪ್ರೌಢಶಾಲೆಗಳಲ್ಲಿ ಕೆಲಸ ಮಾಡುತ್ತಿರುವ ದೈಹಿಕ ಶಿಕ್ಷಕರಿಗೆ ಬಡ್ತಿ ಇಲ್ಲದೆ ನಿವೃತ್ತಿ ಹೊಂದುತ್ತಿದ್ದು ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ಮಾಡಿ ಸಹಶಿಕ್ಷಕರಿಂದ ಮುಖ್ಯ ಶಿಕ್ಷಕರ ಬಡ್ತಿ ನೀಡಲು ಸರ್ಕಾರ ಚಿಂತನೆ ನಡೆಸಿದೆಯೇ; | ಸರ್ಕಾರಿ ಪ್ರೌಢಶಾಲಾ ದೈಹಿಕ ಶಿಕ್ಷಣ ಶಿಕ್ಷಕರಿಗೆ ತಾಲ್ಲೂಕು ದೈಹಿಕ ಶಿಕ್ಷಣ ಪರಿವೀಕ್ಷಕರ ಹುದ್ದೆಗೆ ಮುಂಬಡ್ತಿ ನೀಡಲಾಗುತ್ತಿದೆ. ತಾಲ್ಲೂಕು ದೈಹಿಕ ಶಿಕ್ಷಣ ಪರಿವೀಕ್ಷಕರ ಹುದ್ದೆಯಿಂದ ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿಗಳ ಹುದ್ದೆಗೆ ಹಾಗೂ ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿಗಳಿಂದ ವಿಭಾಗೀಯ ಉಪ ನಿರ್ದೇಶಕರು(ದೈಹಿಕ ಶಿಕ್ಷಣ) ಮತ್ತು ಸಹ ನಿರ್ದೇಶಕರು(ದೈಹಿಕ ಶಿಕ್ಷಣ) ಈ ಹುದ್ದೆಗಳಿಗೆ, ಬಡ್ತಿ ನೀಡಲಾಗುತ್ತಿದೆ.<br><br>ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರ ಹಾಗೂ ದೈಹಿಕ ಶಿಕ್ಷಣ ಶಿಕ್ಷಕರ ವೃಂದ ಮತ್ತು ನೇಮಕಾತಿ ನಿಯಮಗಳು ಬೇರೆ ಬೇರೆ ಆಗಿರುತ್ತದೆ.<br><br>ಶಾಲಾ ಇಲಾಖೆಯ ಪ್ರಸ್ತುತ ಜಾರಿಯಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮಗಳಂತೆ ಗ್ರೂಪ್-ಬಿ ಮುಖ್ಯಶಿಕ್ಷಕರು /ಉಪಪ್ರಾಂಶುಪಾಲರು ವೃಂದದ ಹುದ್ದೆಗೆ ಬಡ್ತಿಗೆ, ಪ್ರೌಢಶಾಲಾ ಸಹ ಶಿಕ್ಷಕರು ವೃಂದವು ಪೋಷಕ ವೃಂದವಾಗಿರುತ್ತದೆ. ಮುಖ್ಯ ಶಿಕ್ಷಕರ ವೃಂದಕ್ಕೆ, ವೃಂದ ಮತ್ತು ನೇಮಕಾತಿ ನಿಯಮದಂತೆ ನಿಗದಿಪಡಿಸಿರುವ ವಿದ್ಯಾರ್ಹತೆ ಎಂದರೆ ಪದವಿ ಜೊತೆಗೆ ಶೈಕ್ಷಣಿಕ ಆಡಳಿತಕ್ಕೆ ಅಗತ್ಯ ಇರುವ B.ED ಪದವಿ ನಿಗದಿಪಡಿಸಲಾಗಿದೆ. ದೈಹಿಕ ಶಿಕ್ಷಣ ಶಿಕ್ಷಕರು B.ED ಪದವಿಯನ್ನು ಹೊಂದಿರುವುದಿಲ್ಲ.<br><br>ಮುಖ್ಯ ಶಿಕ್ಷಕರು ಭೋದನೆಯಲ್ಲಿ ಪ್ರಾವೀಣ್ಯತೆ ಹಾಗೂ ಅನುಭವನ್ನು |
| (ಆ) | ಇದ್ದಲ್ಲಿ ಯಾವ ಕಾಲ ಮಿತಿಯೊಳಗೆ ಬಡ್ತಿ ನೀಡಲಾಗುವುದು? | |

| | | |
|---|---|---|
| | | ಹೊಂದಿರುತ್ತಾರೆ. ಸಹ ಶಿಕ್ಷಕರ ಅನುಪಸ್ಥಿತಿಯಲ್ಲಿ ಸದರಿ ವಿಷಯ ಭೋದನೆಯನ್ನು ಮಾಡುತ್ತಾರೆ. ಆದರೆ ದೈಹಿಕ ಶಿಕ್ಷಕರಿಗೆ ವಿಷಯ ಭೋದನ ತರಬೇತಿ ಆಗಿಲ್ಲದೆ ಇರುವುದರಿಂದ ಸಹ ಶಿಕ್ಷಕರ ಅನುಪಸ್ಥಿತಿಯಲ್ಲಿ ವಿಷಯ ಭೋದನೆಯನ್ನು ನಿರ್ವಹಿಸಲು ಸಾಧ್ಯವಾಗುವುದಿಲ್ಲ.<br>ಮುಖ್ಯ ಶಿಕ್ಷಕರಿಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳು /ಹಿರಿಯ ಉಪನ್ಯಾಸಕರು / ನಿರ್ದೇಶಕರು ಮಧ್ಯಾಹ್ನ ಯೋಜನೆ ಹಾಗೂ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಹುದ್ದೆಗಳಿಗೆ ಭರ್ತಿ ಹೊಂದಲು ಅವಕಾಶವಿರುತ್ತದೆ. ಈ ಎಲ್ಲ ಹುದ್ದೆಗಳು ಶೈಕ್ಷಣಿಕವಾಗಿ ಶಾಲೆಗಳಲ್ಲಿ ವಿಷಯ ಭೋದನೆ ಅನುಭವನ್ನು ಹಾಗೂ ಶೈಕ್ಷಣಿಕ ಮಾರ್ಗದರ್ಶನ ನೀಡುವ ಅನುಭವನ್ನು ಅಪೇಕ್ಷಿಸುತ್ತದೆ. ಆದರೆ ದೈಹಿಕ ಶಿಕ್ಷಣ ಶಿಕ್ಷಕರಿಗೆ ವಿಷಯ ಭೋದನೆಯ ತರಬೇತಿ ಇರುವುದಿಲ್ಲ. ಬದಲಾಗಿ ದೈಹಿಕ ಶಿಕ್ಷಣಕ್ಕೆ ಸಂಬಂಧಿಸಿದಂತೆ ಮಾತ್ರ ತರಬೇತಿಯನ್ನು ಪಡೆದಿರುತ್ತಾರೆ.<br>ದೈಹಿಕ ಶಿಕ್ಷಕರ ಜೇಷ್ಠತಾ ಪಟ್ಟಿಯನ್ನು ಪ್ರತ್ಯೇಕವಾಗಿ ನಿರ್ವಹಿಸಲಾಗುತ್ತಿದ್ದು, ಇವರ ಪ್ರಾವೀಣ್ಯತೆ ಹಾಗೂ ಅನುಭವ ಆಧಾರದ ಮೇಲೆ ತಾಲ್ಲೂಕು ದೈಹಿಕ ಶಿಕ್ಷಣ ಪರಿವೀಕ್ಷಕರು, ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ, ಸಹಾಯಕ ನಿರ್ದೇಶಕರು, (ದೈಹಿಕ ಶಿಕ್ಷಣ), ಸಹ ನಿರ್ದೇಶಕರು (ದೈಹಿಕ ಶಿಕ್ಷಣ) ಹುದ್ದೆಗಳಿಗೆ ಮುಂಬಡ್ತಿಗೆ ಅವಕಾಶ ಕಲ್ಪಿಸಲಾಗಿದೆ.<br>ಮೇಲಿನ ಅಂಶಗಳಿಂದ ದೈಹಿಕ ಶಿಕ್ಷಣ ಶಿಕ್ಷಕರಿಗೆ ಮುಖ್ಯ ಶಿಕ್ಷಕ ಹುದ್ದೆಗೆ ಮುಂಬಡ್ತಿ ನೀಡಲು ಸಾಧ್ಯವಿರುವುದಿಲ್ಲ. |

**ಇಪಿ 214 ಎಸ್‌ಇಎಸ್ 2025**

**(ಎಸ್. ಮಧು ಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ**
**ಇಲಾಖೆ ಸಚಿವರು**